ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ , ಕುಂದಾಪುರ
ಸಿ.ಸಿ. ನಂಬ್ರ: 2284/2017

ಚಾಸಾ: 10 ಪ್ರಾಸಾ:10
ದಿನಾಂಕ: 19.05.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಡಾ. ಚಂದ್ರ ಮರಕಾಲ |
| ತಂದೆಯ ಹೆಸರು | : | ಸಂಕ ಮರಕಾಲ |
| ವಯಸ್ಸು | : | 54 ವರ್ಷ |
| ಉದ್ಯೋಗ | : | ವೈದ್ಯಾಧಿಕಾರಿ |
| ವಾಸ ಸ್ಥಳ | : | ಕುಂದಾಪುರ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಭಾ. ದಂ. ಪ್ರ, ಸಂ, ಕಲಂ 299 ಸಿ ಆರ್ ಪಿ ಸಿ ರಡಿಯಲ್ಲಿ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ನಾನು 2007 ರಿಂದ ಇಲ್ಲಿಯವರೆಗೆ ಕುಂದಾಪುರ ಸರಕಾರಿ ಆಸ್ಪತ್ರೆಯಲ್ಲಿ ವೈದ್ಯಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿ: 26-10-2013 ರಂದು ಬೆಳಿಗ್ಗೆ 11-15 ಗಂಟೆಗೆ ಚಾಸಾ-1ರವರನ್ನು ಮಹಿಳಾ ಪೇದೆ 2083 ಸಬಿತಾ ಎಂಬುವರು ನಮ್ಮ ಆಸ್ಪತ್ರೆಗೆ ಕರೆ ತಂದಿದ್ದು ಅದೇ ದಿನ ಬೆಳಗ್ಗೆ 8-45 ಗಂಟೆಗೆ ಕುಂದಾಪುರದ ಮುಖ್ಯ ಅಂಚೆ ಕಚೇರಿ ಬಳಿ ಯಾರೋ ಇಬ್ಬರು ಅಪರಿಚಿತರು ಬೈಕಿನಲ್ಲಿ ಬಂದು ತನ್ನ ಕುತ್ತಿಗೆಯಲ್ಲಿ ಇದ್ದ ಸರವನ್ನು ಸುಲಿಗೆ ಮಾಡಿಕೊಂಡು ಹೋಗಿರುವ ಬಗ್ಗೆ ಚಿಕಿತ್ಸೆಗಾಗಿ ಬಂದಿದ್ದು ಆಕೆಯನ್ನು ಪರಿಶೀಲಿಸಿದಾಗ ಯಾವುದೇ ಗಾಯಗಳು ಕಂಡು ಬಂದಿರುವುದಿಲ್ಲ.

ಈ ಬಗ್ಗೆ ಗಾಯದ ಪ್ರಮಾಣ ಪತ್ರವನ್ನು ನೀಡಿದ್ದು, ಅದನ್ನು ಸಾಕ್ಷಿ ನೋಡಿ ಗುರುತಿಸಿದ ಮೇರೆಗೆ ಸದ್ರಿ ದಾಖಲೆಯನ್ನು ನಿಪಿ-16 ಎಂದು, ಸಾಕ್ಷಿ ಸಹಿಯನ್ನು ನಿಪಿ-16(ಎ) ಎಂದು ಗುರುತಿಸಲಾಯಿತು.

ಆರೋಪಿಗಳು ತಲೆಮರೆಸಿಕೊಂಡಿದ್ದರಿಂದ ಪಾಟೀ ಸವಾಲು ಇಲ್ಲ ಎಂದು ಪರಿಗಣಿಸಲಾಯಿತು

**ಮರು ವಿಚಾರಣೆ:** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**